ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಗೋಮಾಳ ಮಂಜೂರಾತಿಗೆ ಅರ್ಜಿ ಸಲ್ಲಿಸಿರುವವರ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :-

1178 (1325) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗೋಮಾಳ ಮಂಜೂರಾತಿಯನ್ನು ಮಾಡುವವರು ಯಾರು ಮತ್ತು ಮಂಜೂರಾತಿಗೆ ನಿಗದಿಪಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು ಸೋಂಪುರ ಹೋಬಳಿ ವ್ಯಾಪ್ತಿಯ ಗ್ರಾಮಗಳಲ್ಲಿ ಗೋಮಾಳ ಮಂಜೂರಾತಿಗೆ ಅರ್ಜಿ ಹಾಕಿಕೊಂಡಿರುವವರ ಹೆಸರು ಮತ್ತು ಗ್ರಾಮವಾರು ವಿವರ ನೀಡುವುದು ;

(ಇ) ಸೋಂಪುರ ಹೋಬಳಿಯ ಕಾಸರಘಟ್ಟ ಗ್ರಾಮದಲ್ಲಿ ಗೋಮಾಳ ಅಥವಾ ಸರ್ಕಾರಿ ಭೂಮಿಯನ್ನು ಒತ್ತುವರಿ ಮಾಡಿಕೊಳ್ಳಲಾಗಿದೆಯೇ; ಇದ್ದಲ್ಲಿ, ಒತ್ತುವರಿ ಮಾಡಿಕೊಂಡಿರುವವರ ಹೆಸರು, ವಿಸ್ತೀರ್ಣವಾರು ವಿವರ ನೀಡುವುದು ;

(ಈ) ಇದ್ದಲ್ಲಿ, ಈ ಒತ್ತುವರಿಯನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?